## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆಃ 620/2014

**ಸಾಕ್ಷಿಯನ್ನು ದಿಃ 18.10.2022 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

| | | | |
|---|---|---|---|
| ಹೆಸರು | ರಾಜೇಶ್ | ಸಿಡಬ್ಲ್ಯೂಃ 11 | ಪಿಡಬ್ಲ್ಯೂಃ 7 |
| ತಂದೆಯ ಹೆಸರು | ಲೇಟ್ ಚಂದ್ರು | | |
| ವಯಸ್ಸು | 46 ವರ್ಷ | | |
| ಕೆಲಸ | ಕೂಲಿ | | |
| ವಾಸಸ್ಥಳ | ಹುಣಸೂರು | | |

### ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ.89 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ.89 ಬಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಅಂದಾಜು 10 ವರ್ಷಗಳ ಹಿಂದೆ ಪೊಲೀಸರು ಹೇಳಿದ್ದಕ್ಕೆ ಸಹಿ ಮಾಡಿದ್ದೇನೆ. ಅದರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ದಾಖಲಾತಿಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಿಪಿ 90-97 ಅನ್ನು ನೋಡಿದರೆ ಗುರುತಿಸಲು ಆಗುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

**ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ**

ದಿಃ 09.01.2013 ರಂದು ನಾನು ಹುಣಸೂರು ಪಟ್ಟಣ ಠಾಣೆಯಲ್ಲಿ ರಾಜಮ್ಮ ಕೋಂ ಜಗನ್ನಾಥ ಅವರ ಸಹಿಗಳನ್ನು 8 ಬಿಳಿಯ ಹಾಳೆಗಳಲ್ಲಿ ನನ್ನ ಸಮಕ್ಷಮ 5-6 ಗಂಟೆ ವರೆಗೆ ಮಹಜರ್ ಮಾಡಿ ಸದರಿಯವರ ಸಹಿಗಳನ್ನು ಆರ್-1 ಎ ಇಂದ ಆರ್-8 ಹೆಚ್ ವರೆಗೆ ಗುರುತಿಸಿ ನನ್ನ ಸಮಕ್ಷಮ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರು ಇಲ್ಲವೆಂದಿದ್ದಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಶಿರಿನ್ ಜಾವೀದ್ ಅನ್ಸಾರಿ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.